ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ
ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಆಲೂರು .

ಸಿ.ಸಿ.ಸಂಖ್ಯೆ /409/2022

| | | |
|---|---|---|
| ಸಾಕ್ಷಿದಾರರ ಹೆಸರು | ಯೋಗೇಶ | ಸಿ.ಡಬ್ಲ್ಯೂ 3 |
| ತಂದೆಯ ಹೆಸರು | ತಿಮ್ಮೇಗೌಡ | ಪಿ.ಡಬ್ಲ್ಯೂ 4 |
| ವಯಸ್ಸು | 51 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಬೈರಾಪುರ | |

ದಿಃ- 21.08.2025

ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಸಅ ರವರಿಂದ,

ಚಾಸಾ 2 ಮತ್ತು 4 ರವರ ಪರಿಚಯವಿರುತ್ತದೆ. ಸಾಕ್ಷಿ ನಿಪಿ-6ರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-6(ಬಿ) ಎಂದು ಗುರ್ತಿಸಲಾಯಿತು. ಸಾಕ್ಷಿ ನಿಪಿ 9 ನ್ನು ನೋಡಿ ಗುರುತಿಸಿರುತ್ತಾರೆ. ನಿಪಿ 6 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಅದರಲ್ಲಿ ಏನು ಬರೆಯಲಾಗಿದೆ ನನಗೆ ಗೊತ್ತಿರುವುದಿಲ್ಲ.

(ಈ ಸಂದರ್ಭದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು

ಕೋರಿದ್ದು ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ ಸ.ಸ.ಅರವರಿಂದಃ

ದಿ.30.06.2022 ರಂದು ಪೊಲೀಸರು ನನ್ನನ್ನು ಅಪಘಾತವಾದ ಸ್ಥಳದಲ್ಲಿ ಚಾಸಾ 2 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು 4 ರವರ ಸಮಕ್ಷಮ ಮಹಜರ್ ಮಾಡಿ ಬೆ.11 ರಿಂದ 12 ರವರೆಗೆ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 6 ರ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.

(ಮರು ವಿಚಾರಣೆ ಇಲ್ಲ.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಶ್ರೀಮತಿ ಸ್ನೇಹಾ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಆಲೂರು .